ಉ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದ ಕೈಗೊಂಡಿರುವ ಕ್ರಮಗಳೇನು?

ಶ್ರೀ ಕೆ. ಮಲ್ಲಿಕಾರ್ಜುನ ಖರ್ಗೆ (ಗೃಹಸಚಿವರು)

ಅ) ಹೌದು

ಆ) ಬಂದಿರುವುದಿಲ್ಲ

ಇ) ಬಂದಿರುವುದಿಲ್ಲ

ಈ) ಉದ್ಭವಿಸುವುದಿಲ್ಲ

ಉ) ಉದ್ಭವಿಸುವುದಿಲ್ಲ

ಹಿರೇಕೆರೂರು ತಾಲ್ಲೂಕಿಗೆ ಅಗ್ನಿಶಾಮಕ ಠಾಣೆ ಮಂಜೂರಾತಿ

756(770) ಶ್ರೀ ಬನ್ನಿಕೋಡ್ ಬಿ.ಹೆಚ್ (ಹಿರೇಕೆರೂರು) ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹಾವೇರಿ ಜಿಲ್ಲೆಯ ಹಿರೇಕೆರೂರು ತಾಲ್ಲೂಕಿನಲ್ಲಿ ಅಗ್ನಿಶಾಮಕ ಠಾಣೆಯ ವ್ಯವಸ್ಥೆ ಇಲ್ಲದೆ ಇರುವುದರಿಂದ ತಾಲ್ಲೂಕಿನಲ್ಲಿ ಪ್ರಕೃತಿ ವಿಕೋಪದಿಂದುಂಟಾಗುವ ಬೆಂಕಿ ನಂದಿಸಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ, ಅಗ್ನಿಶಾಮಕ ಠಾಣೆ ತೆರೆಯಲು ಸರ್ಕಾರದವರು ಕ್ರಮಕೈಗೊಳ್ಳುವರೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು)

ಅ) ಹೌದು

ಆ) ಹಿರೇಕೆರೂರಿನಲ್ಲಿ ಅಗ್ನಿಶಾಮಕ ಠಾಣೆಯನ್ನು ತೆರೆಯಲು ಸರ್ಕಾರವು ಆದೇಶ ಸಂ. ಒಇ 163 ಕಆಸೇ 96 ದಿನಾಂಕ 31.3.1997ರಲ್ಲಿ ಮಂಜೂರಾತಿ ನೀಡಲಾಗಿದೆ. ಅಗ್ನಿಶಾಮಕ ಠಾಣೆಯನ್ನು ಪ್ರಾರಂಭಿಸಲು ಅವಶ್ಯಕವಾಗಿ ಬೇಕಾದ ಮೂಲಭೂತ ಸೌಲಭ್ಯಗಳನ್ನು ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸೇಡಂ ತಾಲ್ಲೂಕಿನಲ್ಲಿ ಸಣ್ಣ ನೀರಾವರಿ ಕೆರೆಗಳು

757(805) ಶ್ರೀ ಬಸವಂತ ರೆಡ್ಡಿ ಮೋತಪಲ್ಲಿ (ಸೇಡಂ) ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸೇಡಂ ತಾಲ್ಲೂಕಿನ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ 100 ಎಕರೆಗಳಿಗಿಂತ ಹೆಚ್ಚು ನೀರಾವರಿ ಆಗುತ್ತಿರುವ ಕೆರೆಗಳು ಯಾವುವು;

ಆ) ಆ ಕೆರೆಗಳನ್ನು ಇಲ್ಲಿಯವರೆಗೆ ಸಣ್ಣ ನೀರಾವರಿ ವ್ಯಾಪ್ತಿಯಲ್ಲಿ ಸೇರಿಸಿಕೊಂಡಿಲ್ಲವೇಕೆ:

ಇ) ಈಗಲಾದರೂ ಸಹ 2002-03 ಸಾಲಿನಲ್ಲಿ ಸಣ್ಣ ನೀರಾವರಿ ವ್ಯಾಪ್ತಿಯಲ್ಲಿ ಸೇರಿಸಿ ಕೊಂಡು ದುರಸ್ತಿ ಇತ್ಯಾದಿಗೆ ಅನುದಾನ ನೀಡಿ ರೈತರಿಗೆ ನೀರಾವರಿ ಅನುಕೂಲ ಮಾಡಿಕೊಡಲು ಸರ್ಕಾದವರು ಕ್ರಮ ಕೈಗೊಳ್ಳುವರೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ

ಅ) 18 ಕೆರೆಗಳು (ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ)

ಆ) ಈ ಕೆರೆಗಳನ್ನು ಜಿಲ್ಲಾ ಪಂಚಾಯತ್‌ನಿಂದ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಗೆ ಹಸ್ತಾಂತರಗೊಳಿಸುವ ಬಗ್ಗೆ ನಿಯಮಾನುಸಾರ ಪರಿಶೀಲಿಸಿ, ಕ್ರಮ ಕೈಗೊಳ್ಳಲಾಗುವುದು.

ಇ) ಅನುದಾನದ ಲಭ್ಯತೆಗನುಗುಣವಾಗಿ ಕ್ರಮವನ್ನು ಕೈಗೊಳ್ಳಲಾಗುವುದು.